GOVERNMENT OF KARNATAKA
ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ, ಬೆಳಗಾವಿ - 590002
OFFICE OF THE DEPUTY COMMISSIONER & DISTRICT MAGISTRATE BELAGAVI - 590002
ದೂರವಾಣಿ : 0831-2406324
Email: deo.belagavi@gmail.com

ಕ್ರ: ಡಿಸಿ/ಪಿಎಲ್/ವಹಿ-09/2021-22

ದಿನಾಂಕ:01.06.2021

ವಿಷಯ:- ಬೆಳಗಾವಿ ಜಿಲ್ಲೆಯಲ್ಲಿ ಕೋರೊನಾ ವೈರಸ್ ಸೋಂಕು ಹರಡದಂತೆ ಸಾರ್ವಜನಿಕರ ಆರೋಗ್ಯ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ದಿನಾಂಕ 04.06.2021 ರ ಬೆಳಿಗ್ಗೆ 06.00 ಗಂಟೆಯಿಂದ ದಿನಾಂಕ: 07.06.2021 ರ ಬೆಳಿಗ್ಗೆ 06.00 ಗಂಟೆಯವರೆಗೆ ಸಂಪೂರ್ಣ ಲಾಕ್‌ಡೌನ್ ಘೋಷಿಸುವ ಕುರಿತು.

ಉಲ್ಲೇಖ:- 1) ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಕಾರ್ಯಕಾರಿ ಸಮಿತಿ ಅಧ್ಯಕ್ಷರ ಆದೇಶ ಸಂ: ಕಂಇ 158 ಟಿಎನ್‌ಆರ್ 2020 ದಿನಾಂಕ:20.04.2021, 26.04.2021, 07.05.2021 ಹಾಗೂ ದಿನಾಂಕ:21.05.2021.
2) ಈ ಕಾರ್ಯಾಲಯದ ಸಮಸಂಖ್ಯೆ ಆದೇಶ ದಿನಾಂಕ: 21.04.2021, 03.05.2021, 11.05.2021 ಹಾಗೂ 22.05.2021.
3) ದಂಡ ಪ್ರಕ್ರಿಯಾ ಸಂಹಿತೆ 1973 ಕಲಂ 144.

DISTRICT MAGISTRATE ಜಿಲ್ಲಾ ದಂಡಾಧಿಕಾರಿಗಳು ಬೆಳಗಾವಿ BELAGAVI

*****

ಪ್ರಸ್ತಾವನೆ:-

ಈ ಮೇಲ್ಕಾಣಿಸಿದ ವಿಷಯಕ್ಕೆ ಸಂಬಂದಿಸಿದಂತೆ, ಮಾನ್ಯ ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಕಾರ್ಯಕಾರಿ ಸಮಿತಿ ಅಧ್ಯಕ್ಷರ ಉಲ್ಲೇಖ (1) ರಲ್ಲಿನ ಆದೇಶಗಳಡಿ ಕೋವಿಡ್-19 (ಕರೂನಾ ವೈರಾಣು ಕಾಯಿಲೆ-2019) ನೇದ್ದರ ಸ್ಪೋಟ ಮತ್ತು ಹರಡುವುದನ್ನು ತಡೆಗಟ್ಟಲು ಹಾಗೂ ಸಾರ್ವಜನಿಕರ ಆರೋಗ್ಯ ಮತ್ತು ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ಹಿತದೃಷ್ಟಿಯಿಂದ ದಿನಾಂಕ 07.06.2021 ರ ಬೆಳಿಗ್ಗೆ 06.00 ಗಂಟೆಯವರೆಗೆ ಹಲವು ಮುಂಜಾಗ್ರತಾ ಕ್ರಮಗಳನ್ನು ಪಾಲಿಸುವಂತೆ ಆದೇಶಿಸಿದನ್ವಯ ಉಲ್ಲೇಖ (2) ರಡಿ ಬೆಳಗಾವಿ ಜಿಲ್ಲೆಯಾದ್ಯಂತ ಕೋವಿಡ್-19 (ಕರೊನಾ ವೈರಾಣು ಕಾಯಿಲೆ-2019) ಹರಡದಂತೆ ಸಾರ್ವಜನಿಕರ ಆರೋಗ್ಯ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ದಿನಾಂಕ 07.06.2021 ರ ಬೆಳಿಗ್ಗೆ 06.00 ಗಂಟೆಯವರೆಗೆ ಸಾರ್ವಜನಿಕರು (Non-essential activities) ಗಳಿಗಾಗಿ ಅನಾವಶ್ಯಕವಾಗಿ ಓಡಾಡುವುದನ್ನು ಸಂಪೂರ್ಣವಾಗಿ ದಂಡ ಪ್ರಕ್ರಿಯಾ ಸಂಹಿತೆ 1973 ಕಲಂ 144 ರಡಿ ನಿಷೇಧಿಸಿ ಆದೇಶಿಸಲಾಗಿತ್ತು.

ಮುಂದುವರೆದು ಬೆಳಗಾವಿ ಜಿಲ್ಲೆಯಲ್ಲಿ ದಿನೇ ದಿನೇ ಕೋವಿಡ್-19 (ಕರೊನಾ ವೈರಾಣು ಕಾಯಿಲೆ-2019) ನೇದ್ದರ ಸ್ಪೋಟ ಹೆಚ್ಚಾಗುತ್ತಿರುವುದರಿಂದ ಮತ್ತು ವೈರಾಣು ಹರಡುವಿಕೆಯನ್ನು ತಡೆಗಟ್ಟಲು ಹಾಗೂ ಸಾರ್ವಜನಿಕರ ಆರೋಗ್ಯ ಮತ್ತು ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ಹಿತದೃಷ್ಟಿಯಿಂದ **ದಿನಾಂಕ 04.06.2021 ರ ಬೆಳಿಗ್ಗೆ 06.00 ಗಂಟೆಯಿಂದ ದಿನಾಂಕ: 07.06.2021 ರ ಬೆಳಿಗ್ಗೆ 06.00 ಗಂಟೆಯವರೆಗೆ** ಸಂಪೂರ್ಣ ಲಾಕ್‌ಡೌನ್ ಘೋಷಿಸುವುದು ಸೂಕ್ತವೆಂದು ನನಗೆ ಮನವರಿಕೆ ಆಗಿದ್ದರಿಂದ ಈ ಕೆಳಗಿನಂತೆ ಆದೇಶಿಸಿದೆ.

## ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಲಾಗಿರುವ ಕಾರಣಗಳಿಂದ, **ಎಂ.ಜಿ.ಹಿರೇಮಠ, ಭಾ.ಆ.ಸೇ.** ಜಿಲ್ಲಾಧಿಕಾರಿ ಮತ್ತು ಜಿಲ್ಲಾದಂಡಾಧಿಕಾರಿಯಾದ ನಾನು ದಂಡ ಪ್ರಕ್ರಿಯಾ ಸಂಹಿತೆ 1973 ರ ಕಲಂ 144 ರಲ್ಲಿ ನನ್ನಲ್ಲಿರುವ ಪ್ರದತ್ತವಾದ ಅಧಿಕಾರದ ಮೇರೆಗೆ ಹಾಗೂ ಬೆಳಗಾವಿ ಜಿಲ್ಲೆಯಾದ್ಯಂತ ಕೋವಿಡ್-19 (ಕರೊನಾ ವೈರಾಣು ಕಾಯಿಲೆ-2019) ಪರಿಣಾಮಕಾರಿಯಾಗಿ ತಡೆಗಟ್ಟಲು ಮತ್ತು ಸಾರ್ವಜನಿಕರ ಆರೋಗ್ಯ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ **ದಿನಾಂಕ 04.06.2021 ರ ಬೆಳಿಗ್ಗೆ 06.00 ಗಂಟೆಯಿಂದ ದಿನಾಂಕ: 07.06.2021 ರ ಬೆಳಿಗ್ಗೆ 06.00 ಗಂಟೆಯವರೆಗೆ ಸಂಪೂರ್ಣ ಲಾಕ್‌ಡೌನ್** ಘೋಷಿಸಿ ಈ ಮೂಲಕ ಆದೇಶಿಸಿದ್ದೇನೆ.

**ಈ ಮೇಲಿನ ಆದೇಶವು ಈ ಕೆಳಕಂಡ ಸಂದರ್ಭಗಳಿಗೆ ಅನ್ವಯಿಸುವುದಿಲ್ಲ.**

1) **ಆಸ್ಪತ್ರೆಗಳಿಗೆ ಮತ್ತು ಅಗತ್ಯ ವಸ್ತುಗಳಾದ ಹಾಲು, ಔಷಧಿ ಪೂರೈಕೆ ಹಾಗೂ ಖರೀದಿಗೆ ಮಾತ್ರ.**
2) **ಆನ್‌ಲೈನ್ ಫುಡ್ ಸರ್ವಿಸಿಸ್‌ಗಳಿಗೆ ಮಾತ್ರ.**
3) **ಸರ್ಕಾರಿ ಅಧಿಕಾರಿಗಳಿಗೆ ಸರ್ಕಾರಿ ಸಭೆಗೆ ಹಾಜಾರಾಗಲು ಮಾತ್ರ**
4) **ಸಾರ್ವಜನಿಕ ವಿತರಣಾ ಪದ್ಧತಿಯಡಿಯಲ್ಲಿ ಬರುವ ನ್ಯಾಯಬೆಲೆ ಅಂಗಡಿಗಳು ಸದರಿ ದಿನಗಳಂದು ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 10.00 ಗಂಟೆಯವರೆಗೆ ಮಾತ್ರ ಕಾರ್ಯ ನಿರ್ವಹಿಸತಕ್ಕದ್ದು.**

2..

Scanned by CamScanner

5) **ರೈತ ಸಂಪರ್ಕ ಕೇಂದ್ರ ಹಾಗೂ ಹೆಚ್ಚುವರಿ ಮಳಿಗೆಗಳು ಸದರಿ ದಿನಗಳಂದು ಬೆಳಿಗ್ಗೆ 06.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ಅಂಗಡಿಗಳು ತೆರೆದು ಬೀಜ ಹಾಗೂ ರಸಗೊಬ್ಬರಗಳನ್ನು ವಿತರಿಸಲು ಅವಕಾಶವಿರುತ್ತದೆ. ಪ್ರತಿ ಗ್ರಾಮದಿಂದ 05 ಜನರಿಗೆ ಮಾತ್ರ ರೈತ ಸಂಪರ್ಕ ಕೇಂದ್ರ ಹಾಗೂ ಹೆಚ್ಚುವರಿ ಮಳಿಗೆಗಳಿಗೆ ಹೋಗಲು ಅವಕಾಶವಿರುತ್ತದೆ.**
6) **ಬೆಳಗಾವಿ ನಗರದಲ್ಲಿ ಬೀಜ, ರಸಗೊಬ್ಬರ ಹಾಗೂ ಇತರೆ ಪರಿಕರಗಳ ಮಾರಾಟ ಮಳಿಗೆಗಳು ಸದರಿ ದಿನಗಳಂದು ಬೆಳಿಗ್ಗೆ 06.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ತೆರೆಯಲು ಅವಕಾಶವಿರುತ್ತದೆ, ಅಲ್ಲಿ ತೆರಳುವ ರೈತರು ಗ್ರಾಮ ಪಂಚಾಯತಿ P.D.O. ಹಾಗೂ ಗ್ರಾಮಲೆಕ್ಕಿಗರ ಅನುಮತಿ ಪಡೆಯಬೇಕು.**
7) **ಸದರಿ ದಿನಗಳಂದು ಈಗಾಗಲೇ ಪೂರ್ವಾನುಮತಿ ಪಡೆದುಕೊಂಡು ನಿಗದಿಪಡಿಸಿರುವಂತಹ ಮದುವೆ ಸಮಾರಂಭಗಳಿಗೆ ಮಾತ್ರ.**

**ಈ ಆದೇಶವನ್ನು ಉಲ್ಲಂಘಿಸಿದವರ ವಿರುದ್ಧ ಭಾರತೀಯ ದಂಡ ಸಂಹಿತೆ 188 ರ ಪ್ರಕಾರ ಕ್ರಮ ಜರುಗಿಸಲಾಗುವುದು**

ಈ ವಿಷಯವಾಗಿ ಮೇಲಿನ ಆದೇಶವನ್ನು ಜಾರಿಗೊಳಿಸಲು ಪೊಲೀಸ್ ಆಯುಕ್ತರು, ಬೆಳಗಾವಿ ನಗರ, ಬೆಳಗಾವಿ. ಜಿಲ್ಲಾ ಪೊಲೀಸ ಅಧೀಕ್ಷಕರು, ಬೆಳಗಾವಿ. ಜಿಲ್ಲೆಯ ಎಲ್ಲ ಉಪವಿಭಾಗಾಧಿಕಾರಿಗಳು, ತಹಶೀಲದಾರರು ಹಾಗೂ ಜಿಲ್ಲೆಯ ಸಂಬಂಧಪಟ್ಟ ಎಲ್ಲ ಇಲಾಖಾ ಅಧಿಕಾರಿಗಳು ಕ್ರಮ ಕೈಗೊಳ್ಳುವದು.

ಈ ಆದೇಶವನ್ನು ಇಂದು ದಿನಾಂಕ: 01.06.2021 ರಂದು ನನ್ನ ಸಹಿ ಮತ್ತು ಮೊಹರಿನೊಂದಿಗೆ ಹೊರಡಿಸಲಾಗಿದೆ.

DISTRICT MAGISTRATE ಜಿಲ್ಲಾದಂಡಾಧಿಕಾರಿಗಳು BELAGAVI

(ಎಂ.ಜಿ.ಹಿರೇಮಠ)
**ಜಿಲ್ಲಾಧಿಕಾರಿ ಮತ್ತು ಜಿಲ್ಲಾದಂಡಾಧಿಕಾರಿ,**
**ಬೆಳಗಾವಿ ಜಿಲ್ಲೆ, ಬೆಳಗಾವಿ.**

**ಪ್ರತಿ: ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.**

1. ಪೊಲೀಸ್ ಆಯುಕ್ತರು, ಬೆಳಗಾವಿ ನಗರ, ಬೆಳಗಾವಿ.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ, ಬೆಳಗಾವಿ.
3. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.
4. ಯೋಜನಾ ನಿರ್ದೇಶಕರು, ನಗರಾಭಿವೃದ್ಧಿ ಕೋಶ, ಬೆಳಗಾವಿ.
5. ಆಯುಕ್ತರು ಬೆಳಗಾವಿ ಮಹಾನಗರ ಪಾಲಿಕೆ, ಬೆಳಗಾವಿ.
6. ಜಿಲ್ಲಾ ಶಸ್ತ್ರ ಚಿಕಿತ್ಸಕರು ಬೆಳಗಾವಿ ಜಿಲ್ಲೆ, ಬೆಳಗಾವಿ.
7. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಬೆಳಗಾವಿ ಜಿಲ್ಲೆ, ಬೆಳಗಾವಿ.
8. ಅಬಕಾರಿ ಉಪ ಆಯುಕ್ತರು, ಬೆಳಗಾವಿ.
9. ಉಪವಿಭಾಗಾಧಿಕಾರಿಗಳು ಬೆಳಗಾವಿ/ಬೈಲಹೊಂಗಲ/ಚಿಕ್ಕೋಡಿ.
10. ಜಿಲ್ಲೆಯ ಎಲ್ಲ ತಹಶೀಲದಾರರು.
11. ಹಿರಿಯ ಸಹಾಯಕ ನಿರ್ದೇಶಕರು ವಾರ್ತಾ ಇಲಾಖೆ, ಬೆಳಗಾವಿ.

2– ಈ ಆದೇಶದ ವಿವರಗಳನ್ನು ಜಿಲ್ಲೆಯ ಎಲ್ಲ ವರ್ತಮಾನ ಪತ್ರಿಕೆಗಳಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಉಚಿತವಾಗಿ ಪ್ರಕಟಿಸಲು ಕೋರಿದೆ.

01/06.

**ಅಪರ ಜಿಲ್ಲಾದಂಡಾಧಿಕಾರಿಗಳು,**
**ಬೆಳಗಾವಿ ಜಿಲ್ಲೆ, ಬೆಳಗಾವಿ.**

Scanned by CamScanner